**ಕರ್ನಾಟಕ ಸರ್ಕಾರ**

**ನಿರ್ದೇಶಕರ ಕಛೇರಿ, ಪದವಿ ಪೂರ್ವ ಶಿಕ್ಷಣ ಇಲಾಖೆ, 18ನೇ ಅಡ್ಡರಸ್ತೆ, ಮಲ್ಲೇಶ್ವರ, ಬೆಂಗಳೂರು – 560012.**

**ಸೂಚನೆ**

ಎಲ್ಲಾ ಜಿಲ್ಲಾ ಉಪನಿರ್ದೇಶಕರಿಗೆ, ಪ್ರಾಂಶುಪಾಲರಿಗೆ ಹಾಗೂ ಪರೀಕ್ಷಾ ಕೇಂದ್ರಗಳ ಮುಖ್ಯ ಅಧೀಕ್ಷಕರಿಗೆ ಈ ಮೂಲಕ ತಿಳಿಸುವುದೇನಂದರೆ ದ್ವಿತೀಯ ಪಿಯುಸಿ ಪೂರಕ ಪರೀಕ್ಷೆ 2016ಕ್ಕೆ ಸಂಬಂಧಿಸಿದಂತೆ ಯಾವುದೇ ವಿದ್ಯಾರ್ಥಿಗಳಿಗೆ ಪ್ರವೇಶ ಪತ್ರ ಬಾರದೆ ಇದ್ದ ಸಂದರ್ಭದಲ್ಲಿ ಪ್ರವೇಶ ಪತ್ರಗಳಿಗಾಗಿ ಕಾಲೇಜಿನವರು, ಪೋಷಕರು ಹಾಗೂ ವಿದ್ಯಾರ್ಥಿಗಳು ನಿರ್ದೇಶನಾಲಯದ ಕೇಂದ್ರ ಕಛೇರಿಗೆ ಬರುವ ಅವಶ್ಯಕತೆ ಇರುವುದಿಲ್ಲ. ಈ ಕುರಿತು ಈಗಾಗಲೇ ಕೇಂದ್ರ ಕಛೇರಿಯನ್ನು ಸಂಪರ್ಕಿಸಿದವರಿಗೆ ಪರೀಕ್ಷಾ ನೋಂದಣಿ ಸಂಖ್ಯೆಯನ್ನು ಇಲಾಖಾ ವೆಬ್‌ಸೈಟ್ www.pue.kar.nic.in ನಲ್ಲಿ ಪ್ರಕಟಿಸಲಾಗಿದೆ. ಈ ಸಂಖ್ಯೆಯನ್ನು ವಿದ್ಯಾರ್ಥಿಗಳಿಗೆ ನೀಡಿ ಪರೀಕ್ಷೆಗೆ ಹಾಜರಾಗಲು ಅವಕಾಶ ಮಾಡಿಕೊಡುವಂತೆ ಸೂಚಿಸಿದೆ. ಮುಂದುವರೆದು ಈ ವಿಷಯಕ್ಕೆ ಕುರಿತಂತೆ ಯಾವುದೇ ವಿದ್ಯಾರ್ಥಿಗಳಿಗೆ ಅವಕಾಶವಂಚಿತರಾಗದಂತೆ ವಿಶೇಷ ಆಸಕ್ತಿವಹಿಸಿ ಕಾರ್ಯ ನಿರ್ವಹಿಸತಕ್ಕದ್ದು. ವಿದ್ಯಾರ್ಥಿಗಳ ಪ್ರವೇಶ ಪತ್ರಗಳಿಗೆ ಸಂಬಂಧಿಸಿದ ಗೊಂದಲಗಳೇನಾದರೂ ಇದ್ದಲ್ಲಿ ಕೇಂದ್ರ ಕಛೇರಿಯನ್ನು ದೂರವಾಣಿ ಮೂಲಕ ಸಂಪರ್ಕಿಸಿ ಸಮಸ್ಯೆಗಳಿಗೆ ಪರಿಹಾರ ಕಂಡುಕೊಳ್ಳತಕ್ಕದ್ದು, ತಪ್ಪಿದಲ್ಲಿ ಮುಂದಿನ ಆಗುಹೋಗುಗಳಿಗೆ ಸಂಬಂಧಿಸಿದವರನ್ನು ಹೊಣೆಗಾರನ್ನಾಗಿ ಮಾಡಲಾಗುವುದು.

ಸಹಿ/-

ದಿನಾಂಕ: 01-07-2016

ನಿರ್ದೇಶಕರು.